ಓ.ಎಸ್. ನಂ.369/2021 ರಲ್ಲಿ
ಪಿ.ಡಬ್ಲ್ಯೂ-1(ಪೂರ್ಣಿಮ)

ದಿನಾಂಕ 22.11.2023 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

2. ನಮ್ಮ ವಕೀಲರ ಮೂಲಕ ಪ್ರತಿವಾದಿಗೆ ನೀಡಲಾದ ನೋಟಿಸ್‌ನ ಕಛೇರಿ ಪ್ರತಿಯನ್ನು ನಿಪಿ-1, ಸದರಿ ನೋಟಿಸ್‌ಗೆ ಪ್ರತಿವಾದಿಯ ಪರ ವಕೀಲರು ನಮ್ಮ ವಕೀಲರಿಗೆ ನೀಡಿರುವ ಜವಾಬು ನೋಟಿಸನ್ನು ನಿಪಿ-2, ದಾವಾ ಸ್ವತ್ತಿನ ಇ-ಖಾತೆಯನ್ನು ನಿಪಿ-3 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.